**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ: ಯತೀಂದ್ರ.ಎಸ್ ಇವರು ನಿಯಮ-72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ**

**ವಿಷಯ:**

ಹಿಂದುಳಿದ ವರ್ಗಗಳ ಪ್ರವರ್ಗ-1 ಮತ್ತು 2ಎ ಸಮುದಾಯಗಳಿಗೆ ಸಿವಿಲ್ ಗುತ್ತಿಗೆ ಕಾಮಗಾರಿಗಳಲ್ಲಿ ರೂ.1.00 ಕೋಟಿಯವರೆಗೆ ಮೀಸಲಾತಿ ನೀಡಿ ಸರ್ಕಾರದ ಆದೇಶವನ್ನು ಹೊರಡಿಸಲಾಗಿದೆ. ಸದರಿ ಪ್ರವರ್ಗಗಳಿಗೆ ಗುತ್ತಿಗೆಯಲ್ಲಿ ಮೀಸಲಾತಿಯನ್ನು ಪಡೆಯಲು ಆದಾಯದ ಮಿತಿ ಇರುವುದಿಲ್ಲ. ಈ ಪ್ರವರ್ಗಗಳ ಜನರು ಕಂದಾಯ ಇಲಾಖೆಯ ತಹಶೀಲ್ದಾರ್ ಕಛೇರಿಗೆ ಭೇಟಿ ನೀಡಿ ಕೇವಲ ಜಾತಿಯನ್ನು ನಮೂದಿಸಿ, ಪ್ರವರ್ಗ-1 ಮತ್ತು 2ಎ ಗೆ ಜಾತಿ ಪ್ರಮಾಣ ಪತ್ರವನ್ನು ಕೊಡುವಂತೆ ಮನವಿ ಮಾಡಿದಾಗ ತಹಶೀಲ್ದಾರ್ ಕಛೇರಿಗಳಲ್ಲಿ ಆದಾಯವನ್ನು ನಮೂದಿಸದೇ ಕೇವಲ ಜಾತಿ ಪ್ರಮಾಣ ಪತ್ರವನ್ನು ಸದರಿ ವರ್ಗಗಳಿಗೆ ಕೊಡಲು ಸಾಧ್ಯವಿಲ್ಲವೆಂದು ತಿಳಿಸುತ್ತಿದ್ದಾರೆ. ಇದರಿಂದ ಹಿಂದುಳಿದ ಸಮುದಾಯಗಳಿಗೆ ಅನ್ಯಾಯವಾಗುತ್ತಿದ್ದು, ಈ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆಯಲು ಇಚ್ಛಿಸುತ್ತೇನೆ.

**ಉತ್ತರ:**

ಸರ್ಕಾರದ ಆದೇಶ ಸಂಖ್ಯೆ:ಸಕಇ 225 ಬಿಸಿಎ 2000, ದಿನಾಂಕ:30-03-2002 ರಂತೆ ಹಿಂದುಳಿದ ವರ್ಗಗಳ ಪ್ರವರ್ಗ-1 ರಲ್ಲಿ 95 ಮುಖ್ಯ ಜಾತಿಗಳಿಗೆ 287 ಇತರೆ ಜಾತಿಗಳು ಸೇರಿ ಒಟ್ಟು 382 ಜಾತಿಗಳಿರುತ್ತವೆ ಮತ್ತು ಪ್ರವರ್ಗ-2(ಎ) ರಲ್ಲಿ 102 ಮುಖ್ಯ ಜಾತಿಗಳಿಗೆ 316 ಇತರೆ ಜಾತಿಗಳು ಸೇರಿದಂತೆ ಒಟ್ಟು 418 ಜಾತಿಗಳು ಇರುತ್ತವೆ. ಈ ಸಮುದಾಯಗಳಿಗೆ ಸಿವಿಲ್ ಗುತ್ತಿಗೆ ಕಾಮಗಾರಿಗಳಲ್ಲಿ ರೂ.1.00 ಕೋಟಿಯವರೆಗೆ ಮೀಸಲಾತಿ ನಿಗದಿಪಡಿಸಿ, ಸರ್ಕಾರದ ಅಧಿಸೂಚನೆ ಸಂಖ್ಯೆ:ಸಂವ್ಯಶಾಇ 44 ಶಾಸನ 2023, ದಿನಾಂಕ:10-06-2024ರಂದು ಅಧಿಸೂಚನೆ ಹೊರಡಿಸಲಾಗಿದೆ.

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ರಡಿ (2000ರ ಕರ್ನಾಟಕ ಅಧಿನಿಯಮ 28) ಟೆಂಡರ್ ಆಹ್ವಾನಿಸುವ ಪ್ರಾಧಿಕಾರವು, ಅಧಿಸೂಚಿತ ಇಲಾಖೆಯಲ್ಲಿ ನಿಯಮಿಸಿದ ಪ್ರಕ್ರಿಯೆಗಳನ್ನು ಅನುಸರಿಸುವ ಮೂಲಕ ಕೈಗೊಳ್ಳಬೇಕಾದ ಅಗತ್ಯ ನೋಟೀಸುಗಳು, ಪತ್ರ ವ್ಯವಹಾರಗಳು ಮತ್ತು ಪ್ರಕಟಣೆಗಳನ್ನು ಹೊರಡಿಸುವಾಗ ನಿರ್ಮಾಣ ಕಾಮಗಾರಿಗಳ ಮೌಲ್ಯ ರೂ.1.00 ಕೋಟಿ ರೂಪಾಯಿಗಳಿಗೆ ಪ್ರವರ್ಗ-1 ರಲ್ಲಿ ಶೇಕಡ 4% ಮತ್ತು ಪ್ರವರ್ಗ -2(ಎ) ರಲ್ಲಿ ಶೇಕಡ 15% ರಷ್ಟನ್ನು ಮೀರದಂತೆ ನಿರ್ದಿಷ್ಟಪಡಿಸಿದ ಹಿಂದುಳಿದ ಜಾತಿಗಳಿಗೆ ಸೇರಿದ ಟೆಂಡರುದಾರರುಗಳಿಗೆ ಮಾತ್ರ ಟೆಂಡರನ್ನು ನೀಡತಕ್ಕದ್ದು ಎಂಬುದಾಗಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಹಿಂವಕ 396 ಬಿಎಂಎಸ್ 2023, ದಿನಾಂಕ:10-10-2023 ರಲ್ಲಿ ಹಿಂದುಳಿದ ವರ್ಗಗಳ ಪ್ರವರ್ಗ-1 ಮತ್ತು ಪ್ರವರ್ಗ-2(ಎ) ಸಮುದಾಯಗಳಿಗೆ ಸೇರಿದ ಉದ್ಯಮಿಗಳು ಅತೀ ಸಣ್ಣ / ಸಣ್ಣ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆ / ಸೇವಾ ಘಟಕಗಳನ್ನು ಸ್ಥಾಪಿಸಲು ಅನುವಾಗುವಂತೆ ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಪಡೆಯುವ ರೂ.10.00 ಕೋಟಿಗಳ ವರೆಗಿನ ಸಾಲಕ್ಕೆ ಶೇಕಡ 6% ರ ಬಡ್ಡಿ ದರದಲ್ಲಿ ಸಹಾಯಧನವನ್ನು ನೀಡಲು ಕೆಲವು ಷರತ್ತಿಗಳಿಗೊಳಪಟ್ಟು ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ:ಸಕಇ 225 ಬಿಸಿಎ 2000, ದಿನಾಂಕ:30-03-2002ರ ಅನುಬಂಧ-I ರಲ್ಲಿನ ಹಿಂದುಳಿದ ವರ್ಗಗಳ ಪ್ರವರ್ಗ-1 ಮತ್ತು ಪ್ರವರ್ಗ-2(ಎ) ಜಾತಿಯ ಸಿವಿಲ್ ಗುತ್ತಿಗೆದಾರರಿಗೆ / ಉದ್ಯಮಿಗಳಿಗೆ ರೂ.1.00ಕೋಟಿಗಳ ವರೆಗಿನ ಕಾಮಗಾರಿಗಳಲ್ಲಿ ವಿನಾಯಿತಿ ಪಡೆಯಲು 'ನಮೂನೆ-ಐ' ರಲ್ಲಿ ಪ್ರಪತ್ರವನ್ನು ನಿಗದಿಪಡಿಸಿ, ಸರ್ಕಾರದ ಪತ್ರ ಸಂಖ್ಯೆ: ಹಿಂವಕ 207 ಬಿಸಿಎ 2025, ದಿನಾಂಕ:29-07-2025ರ ಪತ್ರದಲ್ಲಿ 'ನಮೂನೆ-ಐ' ರಂತೆ ಜಾತಿ ಪ್ರಮಾಣ ಪತ್ರಗಳನ್ನು ವಿತರಿಸಲು ಸಂಬಂಧಪಟ್ಟವರಿಗೆ ಅಗತ್ಯ ಸೂಚನೆ / ನಿರ್ದೇಶನಗಳನ್ನು ನೀಡುವಂತೆ ಕಂದಾಯ ಇಲಾಖೆಗೆ ತಿಳಿಸಲಾಗಿದೆ. ಅದರಂತೆ, ಜಾತಿ ಪ್ರಮಾಣ ಪತ್ರಗಳನ್ನು ವಿತರಿಸಲು ಕಂದಾಯ ಇಲಾಖೆಯು ಕ್ರಮವಹಿಸಲಿದೆ.

ಸಂಖ್ಯೆ: ಹಿಂವಕ 309 ಬಿಸಿಎ 2025

(ಶಿವರಾಜ ಎಸ್. ತಂಗಡಗಿ)
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು